ಆ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

ಇ) ಇದರ ಅಂದಾಜು ವೆಚ್ಚವೆಷ್ಟು ; (ವಿವರ ನೀಡುವುದು) ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ಬಂದಿದೆ.

ಆ) ಮತ್ತು ಇ) ಯೋಜನೆಯ ಪ್ರಾಥಮಿಕ ತನಿಖಾ ವರದಿಯನ್ನು ತಯಾರಿಸಲು ಸೂಚಿಸಲಾಗಿದ್ದು, ಪ್ರಾಥಮಿಕ ತನಿಖೆ ಕೈಗೊಂಡ ನಂತರ ಯೋಜನೆಯ ತಾಂತ್ರಿಕ ಹಾಗೂ ಆರ್ಥಿಕ ಶಕ್ಯತೆಯನ್ನು ಅವಲಂಬಿಸಿ ಅಂದಾಜು ವೆಚ್ಚವನ್ನು ನಿರ್ಧರಿಸಬಹುದಾಗಿದೆ.

812 (545) ಶ್ರೀ ತಿಮ್ಮರಾಯಪ್ಪ ಕೆ.ಎಂ. (ಪಾವಗಡ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬರಗಾಲದಿಂದ ತತ್ತರಿಸಿರುವ ಬೆಳೆ ವಿಮಾ ರಹಿತ ರೈತರಿಗೆ ಎಕರೆವಾರು ಬೆಳೆ ನಷ್ಟ ಪರಿಹಾರ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಆ) ಆಂಧ್ರಪ್ರದೇಶದಲ್ಲಿ ಶೇಂಗಾ ಬೆಳೆಯುವ ರೈತರಿಗೆ ಪರಿಹಾರ ನೀಡಿದಂತೆ ಈ ರಾಜ್ಯದ ರೈತರುಗಳಿಗೆ ಪರಿಹಾರ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಇ) ಹಾಗಿಲ್ಲದಿದ್ದಲ್ಲಿ, ರೈತರು ಸಂಕಷ್ಟಕ್ಕೆ ಈಡಾಗುತ್ತಾರೆಂಬ ಅಂಶ ಸರ್ಕಾರದ ಗಮನದಲ್ಲಿದೆಯೇ ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) 50%ಕ್ಕಿಂತ ಹೆಚ್ಚು ಬೆಳೆ ನಷ್ಟ ಸಂಭವಿಸಿದ ಪ್ರಕರಣಗಳಲ್ಲಿ ಸಣ್ಣ ಮತ್ತು ಅತಿ ಸಣ್ಣ ಬೆಳೆ ವಿಮಾರಹಿತ ರೈತರಿಗೆ ಪ್ರಕೃತಿ ವಿಕೋಪ ಮಾರ್ಗಸೂಚಿಗಳನ್ವಯ ಪರಿಹಾರ ನೀಡಲು ಅವಕಾಶವಿದೆ.

ಆ) ಈ ಪ್ರಶ್ನೆಯ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

813 (1243) ಶ್ರೀ ವೈಜ್ಯನಾಥ ಪಾಟೀಲ್ (ಚಿಂಚೋಳಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರಾಯಿ ನಿಷೇಧದ ಪ್ರಸ್ತಾವನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ;

ಆ) ಸಾರಾಯಿ ಮಾರಾಟದಿಂದ ಸರ್ಕಾರಕ್ಕೆ ಪ್ರತಿ ವರ್ಷ ಸಂದಾಯವಾಗುವ ಸರಾಸರಿ ಮೊತ್ತವೆಷ್ಟು ;

ಇ) ಸಾರಾಯಿ ನಿಷೇಧದಿಂದಾಗುವ ನಷ್ಟದ ಭರ್ತಿಗಾಗಿ ಸರ್ಕಾರ ಕಂಡುಕೊಂಡಿರುವ ಪರ್ಯಾಯ ಆದಾಯದ ಮೂಲಗಳು ಯಾವುವು ;

ಈ) ಅಂತಹ ಆದಾಯ ತರುವ ಮೂಲಗಳನ್ನು ಸರ್ಕಾರ ಗುರುತಿಸುವ ಕಾರ್ಯದಲ್ಲಿ ಮಗ್ನವಾಗಿದೆಯೇ ?